**All India Radio: Bangalore**
**Regional Bulletin In Kannada**
**15.05.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.05.2025 / 2.30 p.m.**
**********

ಮುಖ್ಯಾಂಶಗಳು

- ೧. ಅಪರೇಷನ್ ಸಿಂದೂರ್ ಮೂಲಕ ಭಾರತದ ವಾಯು ರಕ್ಷಣಾ ವ್ಯವಸ್ಥೆ ಸಶಕ್ತವಾಗಿರುವುದನ್ನು ಜಗತ್ತಿಗೆ ತಿಳಿಸಿದ್ದೇವೆ - ಡಾ. ರಾಧಾ ಮೋಹನ್ ದಾಸ್ ಅಗ್ರವಾಲ್
- ೨. ಬೆಂಗಳೂರಿನ ಶಿರೂರ್ ಪಾರ್ಕ್ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ತಿರಂಗಾಯಾತ್ರೆ - ವಿವಿಧ ಗಣ್ಯರು ಭಾಗಿ
- ೩. ಹೊಸಪೇಟೆಯಲ್ಲಿ ಇದೇ ೨೦ರಂದು ಐವತ್ತು ಸಾವಿರ ಜನಕ್ಕೆ ಹಕ್ಕು ಪತ್ರ - ಡಾ.ಜಿ.ಪರಮೇಶ್ವರ್
- ೪. ಗೋಕರ್ಣದಲ್ಲಿ ಪ್ರವಾಸಿಗರ ರಕ್ಷಣೆಗೆ ಕ್ರಮ - ಉತ್ತರಕನ್ನಡ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ

********

ಆಪರೇಷನ್ ಸಿಂದೂರದ ಮೂಲಕ ಭಾರತದ ವಾಯು ರಕ್ಷಣಾ ವ್ಯವಸ್ಥೆಯು ಅತ್ಯಂತ ಸಶಕ್ತವಾಗಿರುವುದಾಗಿ ಜಗತ್ತಿಗೇ ನಾವು ತಿಳಿಸಿದ್ದೇವೆ ಎಂದು ಬಿಜೆಪಿ ಕರ್ನಾಟಕ ರಾಜ್ಯ ಉಸ್ತುವಾರಿ ಮತ್ತು ರಾಜ್ಯಸಭಾ ಸದಸ್ಯ ಡಾ. ರಾಧಾ ಮೋಹನ್ ದಾಸ್ ಅಗ್ರವಾಲ್ ಅವರು ವಿಶ್ಲೇಷಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿ, ಭಾರತದ ಮಾನ, ಸಮ್ಮಾನದ ರಕ್ಷಣೆ ಮತ್ತು ಭಾರತೀಯರ ಹತ್ಯೆಗೆ ಪ್ರತೀಕಾರವಾಗಿ ಭಾರತೀಯ ಸೇನೆಯು ಆಪರೇಷನ್ ಸಿಂದೂರ ಕೈಗೊಂಡಿದೆ. ಇದನ್ನು ಪ್ರಶಂಸಿಸಿ ಮತ್ತು ಭಾರತದ ಸೇನೆಗೆ ಧನ್ಯವಾದ ಸಮರ್ಪಣೆಗಾಗಿ ದೇಶಾದ್ಯಂತ ತಿರಂಗಾ

ಯಾತ್ರೆ ನಡೆಸಲಾಗುತ್ತಿದೆ ಎಂದು ಪ್ರಕಟಿಸಿದರು. ಪ್ರದಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತದ ಸೇನೆಯು ಪೆಹಲ್ಗಾಂ ಭಯೋತ್ಪಾದನಾ ಕೃತ್ಯಕ್ಕೆ ಕಾರಣಕರ್ತರಾದ ಎರಡು ಸಂಘಟನೆಗಳ ಕಾರ್ಯಾಲಯ, ತರಬೇತಿ ಕೇಂದ್ರಗಳನ್ನು ಹಾಗೂ ಉಗ್ರರನ್ನು ಹತ್ಯೆ ಮಾಡಿದೆ. ಸಂಪೂರ್ಣ ಸಂಯಮದಿಂದ ಹಾಗೂ ಯುದ್ಧದ ಎಲ್ಲ ನಿಯಮಗಳನ್ನು ಪಾಲಿಸುತ್ತ, ಈ ಅಭಿನಂದನೀಯ ಕಾರ್ಯ ಮಾಡಿದ್ದು, ಇದು ಹೆಮ್ಮೆಯ ವಿಚಾರ ಎಂದು ತಿಳಿಸಿದರು. ಇದೊಂದು ಕದನವಿರಾಮ ಮಾತ್ರ; ಯುದ್ಧವನ್ನು ಸ್ಥಗಿತಗೊಳಿಸಿದ್ದೇವೆ ಎಂದು ಪ್ರಧಾನಿ ಹೇಳಿದ್ದಾರೆ. ಭಯೋತ್ಪಾದನಾ ಕೃತ್ಯ ಮುಂದುವರೆದಲ್ಲಿ ಯುದ್ಧ ಮುಂದುವರೆಯುತ್ತದೆ ಎಂದೂ ತಿಳಿಸಿದ್ದಾರೆ ಎಂದು ರಾಧಾ ಮೋಹನ್ ದಾಸ್ ಅಗ್ರವಾಲ್ ಅವರು ಗಮನ ಸೆಳೆದರು. ಸಿಂಧೂ ನದಿ ನೀರಿನ ಕುರಿತ ಒಪ್ಪಂದವು ಭಾರತ ವಿರೋಧಿ ಎಂದು ಪ್ರಶ್ನೆಗೆ ಉತ್ತರ ನೀಡಿದ ಅವರು, ಒಪ್ಪಂದದಡಿ ಶೇ ೮೦ ನೀರಿನ ಅಧಿಕಾರವನ್ನು ಪಾಕಿಸ್ತಾನಕ್ಕೆ ನೀಡಲಾಗಿದೆ. ನದಿ ನೀರಿನ ಬಳಕೆಗೆ ಕಾಲುವೆ ನಿರ್ಮಿಸಲು ಭಾರತವು ಹಣವನ್ನೂ ನೀಡಿತ್ತು ಎಂದು ಗಮನಕ್ಕೆ ತಂದರು. ಇದು ಭಾರತದ ದೀರ್ಘಕಾಲೀನ ಒಳಿತನ್ನು ಪರಿಗಣಿಸಿಲ್ಲ ಎಂದು ಆಕ್ಷೇಪಿಸಿದರು.

********

ರಾಜ್ಯ ಬಿಜೆಪಿಯಿಂದ ಆಪರೇಷನ್ ಸಿಂಧೂರ ಭಾರತದ ಸೇನೆಯೊಂದಿಗೆ ರಾಷ್ಟ್ರ ರಕ್ಷಣೆಗಾಗಿ ನಾಗರಿಕರು ಎನ್ನುವ ವಿಷಯದೊಂದಿಗೆ ಇಂದು ಮಂತ್ರಿ ಮಾಲ್ ಮುಂಭಾಗದಲ್ಲಿರುವ ಶಿರೂರು ಪಾರ್ಕ್ ಮೈದಾನದಿಂದ ತಿರಂಗಾ ಯಾತ್ರೆ ನಡೆಯಿತು. ಈ ವೇಳೆ ರಾಜ್ಯ ಉಸ್ತುವಾರಿಗಳು ಮತ್ತು ರಾಜ್ಯಸಭಾ ಸಂಸದರಾದ ಡಾ. ರಾಧಾ ಮೋಹನ್ ದಾಸ್ ಅಗ್ರವಾಲ್, ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಸೇರಿ ಇತರರು ಭಾಗವಹಿಸಿದ್ದರು.

********

ಕೇಂದ್ರದಿಂದ ರಾಜ್ಯಕ್ಕೆ ಐದೂವರೆ ಸಾವಿರ ಕೋಟಿ ರೂ. ತಕ್ಷಣ ಬರಬೇಕು. ರಾಜ್ಯ ಮತ್ತು ಕೇಂದ್ರದ ನಡುವೆ ಇರುವ ಸಂಬಂಧದ ನಿಯಮಗಳನ್ನು ಆಧರಿಸಿ ಒತ್ತಾಯ ಮಾಡಬೇಕಾಗುತ್ತದೆ. ಕೊನೆಯ ಬಾರಿ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿ, ದೆಹಲಿ ಪ್ರತಿಭಟನೆ ನಡೆಸಲಾಯಿತು. ನಮಗೆ ಬರಬೇಕಾದ ಅನುದಾನ ಮಂಜೂರು ಮಾಡಿದರೆ, ನಾವೇಕೆ ಒತ್ತಾಯಿಸುತ್ತೇವೆ. ಹಣ ಬಿಡುಗಡೆಯಾದರೆ ರಾಜ್ಯಗಳ ಅಭಿವೃದ್ಧಿಗೆ ಸಹಾಯವಾಗುತ್ತದೆ. ಕೂಡಲೇ ಹಣ ಬಿಡುಗಡೆ

ಮಾಡುವಂತೆ ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಒತ್ತಾಯಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಇದೇ ೨೦ರಂದು ನಡೆಯುವ ಸಮಾವೇಶ ದೊಡ್ಡ ಪ್ರಮಾಣದಲ್ಲಿ ಮಾಡುತ್ತಿದ್ದೇವೆ. ಮುಖ್ಯವಾಗಿ ಕಂದಾಯ ಇಲಾಖೆಯಿಂದ ೫೦ ಸಾವಿರಕ್ಕೂ ಹೆಚ್ಚು ಜನರಿಗೆ ಹಕ್ಕುಪತ್ರಗಳನ್ನು ನೀಡಲಾಗುತ್ತಿದೆ. ಇದೊಂದು ಸರ್ಕಾರದ ಕಾರ್ಯಕ್ರಮ. ಲೋಕಸಭೆ ವಿರೋಧ ಪಕ್ಷ ನಾಯಕರಾದ ರಾಹುಲ್ ಗಾಂಧಿ, ರಾಜ್ಯಸಭಾ ವಿರೋಧ ಪಕ್ಷದ ನಾಯಕರು ಹಾಗೂ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಖರ್ಗೆ, ಸುರ್ಜೇವಾಲಾ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

********

ಹಾಸನ ನಗರದ ವಿವಿಧೆಡೆ ಇಂದು ಬೆಳಿಗ್ಗೆ ಉಪ ಲೋಕಾಯುಕ್ತ ಕೆ. ಎನ್ ಫಣೀಂದ್ರ ಅವರ ನೇತೃತ್ವದ ಅಧಿಕಾರಿಗಳ ತಂಡ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿತು. ನಗರದ ಮಹಾರಾಜ ಪಾರ್ಕ್, ಕೆಎಸ್ಆರ್‌ಟಿಸಿ ಬಸ್ ನಿಲ್ದಾಣ, ಸೇರಿದಂತೆ ವಿವಿಧೆಡೆ ಮೂಲಭೂತ ಸೌಕರ್ಯಗಳನ್ನು ವೀಕ್ಷಿಸಿದ ಅವರು, ಸ್ವಚ್ಛತೆ ಹಾಗೂ ಸೌಲಭ್ಯಗಳು ಜನರಿಗೆ ತಲುಪುತ್ತಿದೆಯ ಎಂಬುದರ ಬಗ್ಗೆ ಅಧಿಕಾರಿಗಳು ಹಾಗೂ ಸಾರ್ವಜನಿಕರಿಂದ ಮಾಹಿತಿ ಪಡೆದರು.. ಕುಡಿಯುವ ನೀರು, ಶೌಚಾಲಯ, ಸೇರಿದಂತೆ ಇನ್ನಿತರ ಸಮಸ್ಯೆಗಳ ಬಗ್ಗೆ ಖುದ್ದು ಭೇಟಿ ನೀಡಿ ಅಲ್ಲಿನ ಸಮಸ್ಯೆಗಳನ್ನು ಪರಿಶೀಲಿಸಿದರು, ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್ ಪೂರ್ಣಿಮಾ, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ, ಸೇರಿದಂತೆ ಎಲ್ಲ ಪ್ರಮುಖ ಅಧಿಕಾರಿಗಳು ಹಾಜರಿದ್ದು ಉಪ ಲೋಕಾಯುಕ್ತರಿಗೆ ಮಾಹಿತಿ ಒದಗಿಸಿದರು.

********

ಆಪರೇಷನ್ ಸಿಂದೂರ್ ನಡೆದ ನಂತರ ದೇಶಾಂದ್ಯಂತ ಜನರು ಭಾರತೀಯ ಸೇನೆಗೆ ನೈತಿಕ ಸ್ಥೈರ್ಯ ತುಂಬುವ ಕೆಲಸ ಮಾಡುತ್ತಿದ್ದಾರೆ. ಉಗ್ರರ ದಾಳಿಯೂ ಸೇರಿದ ಹಾಗೆ ನಮ್ಮ ಸೈನ್ಯ ಎಲ್ಲಾ ರೀತಿಯ ಆಕ್ರಮಣದ ವಿರುದ್ಧ ಸರ್ವ ಸನ್ನದ್ಧವಾಗಿದ್ದು ಈ ಸಂದರ್ಭದಲ್ಲಿ ಆಕಾಶವಾಣಿ

ವಿವಿಧ ಕ್ಷೇತ್ರಗಳ ಪ್ರಮುಖ ವ್ಯಕ್ತಿಗಳ ದೇಶಾಭಿಮಾನದ ಅಭಿಪ್ರಾಯಗಳನ್ನು ಪ್ರಸಾರ ಮಾಡುತ್ತಿದೆ. ಅಂತಾರಾಷ್ಟ್ರೀಯ ವಿಕಲಚೇತನ ರೈಫಲ್ ಕ್ರೀಡಾಪಟು, ರಾಕೇಶ ನಿಡಗುಂದಿ ಭಾರತೀಯ ಸೈನ್ಯ ನಮ್ಮೆಲ್ಲರ ಹೆಮ್ಮೆ. ಒಂದು ದೇಶದ ನಿಜವಾದ ಹೀರೋ ಎಂದರೆ ಅದು ಸೈನಿಕ. ನಮ್ಮನ್ನು ರಕ್ಷಿಸಲು ಯಾವಾಗಲೂ ಸಿದ್ದರಿರುತ್ತಾರೆ ಎಂದು ಆಕಾಶವಾಣಿಗೆ ತಿಳಿಸಿದ್ದಾರೆ.

ಬೈಟ್: ಅಂತಾರಾಷ್ಟ್ರೀಯ ವಿಕಲಚೇತನ ರೈಫಲ್ ಕ್ರೀಡಾಪಟು, ರಾಕೇಶ ನಿಡಗುಂದಿ

********

ಗೋಕರ್ಣ ಪ್ರವಾಸಿ ತಾಣದಲ್ಲಿ ಸಾರ್ವಜನಿಕರ ಮತ್ತು ಪ್ರವಾಸಿಗರ ಸೂಕ್ತ ರಕ್ಷಣೆಗೆ ಮತ್ತು ಅಪರಾಧ ಪ್ರಕ್ರಿಯೆ ತಡೆಗಟ್ಟುವ ಉದ್ದೇಶದಿಂದ ಹೆಚ್ಚು ಸಿಸಿ ಕ್ಯಾಮೆರಾ ಅಳವಡಿಸಿ ಡಿಜಿಟಲ್ ಪೊಲೀಸ್ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ಉತ್ತರಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ನಾರಾಯಣ್ ಹೇಳಿದರು. ಅವರು ಗೋಕರ್ಣದಲ್ಲಿ , ಸಾರ್ವಜನಿಕರ ಮತ್ತು ಪ್ರವಾಸಿಗರ ಸುರಕ್ಷತೆ ಹಾಗೂ ಜಾಗೃತಿಗಾಗಿ ಪೊಲೀಸ್ ಮಾಹಿತಿ ಕೇಂದ್ರ, ಜಾಗೃತಿ ಫಲಕಗಳು ಹಾಗೂ ಪೊಲೀಸ್ ಚೌಕಿಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಗೋಕರ್ಣವು ಪ್ರವಾಸಿಗರ ನೆಚ್ಚಿನ ಪ್ರವಾಸಿ ತಾಣವಾಗಿದೆ. ಇಲ್ಲಿಗೆ ಪ್ರತಿ ವರ್ಷ೧.೫ ಲಕ್ಷ ಪ್ರವಾಸಿಗರು ಆಗಮಿಸುತ್ತಾರೆ. ಇಲ್ಲಿ ಸಾಹಸ ಚಟುವಟಿಕೆ ನಡೆಸಲು ಪ್ರಯತ್ನಿಸಿ ಸಮುದ್ರದಲ್ಲಿ ಮುಳುಗಿ ಸಾವಿಗೀಡಾಗುವ ಪ್ರಕರಣಗಳು ಸಂಭವಿಸುತ್ತಿವೆ, ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಾಗೂ ಪ್ರವಾಸಿಗರ ಸುರಕ್ಷಿತ ದೃಷ್ಟಿಯಿಂದ ಸಿಸಿ ಕ್ಯಾಮೆರಾ ಅಳವಡಿಸಿ ಎಚ್ಚರಿಕೆ ನೀಡಲಾಗುವುದು, ಅಪಾಯಕಾರಿ ಸ್ಥಳಗಳಲ್ಲಿ ತೆರಳದಂತೆ ೫ ಕಡೆ ಪೊಲೀಸ್ ಚೌಕಿ ವ್ಯವಸ್ಥೆ ಮಾಡಿ ಪ್ರವಾಸಿಗರಿಗೆ ಮಾಹಿತಿ ನೀಡಲಾಗುವುದು ಹಾಗೂ ಎಲ್ಲಾ ಬೀಚ್‌ಗಳಲ್ಲಿ ಮತ್ತು ಅಪಾಯಕಾರಿ ಸ್ಥಳಗಳಲ್ಲಿ ಸೂಚನಾ ಫಲಕವನ್ನು ಅಳವಡಿಸಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಗೋಕರ್ಣ ಗ್ರಾ.ಪಂ. ಅಧ್ಯಕ್ಷೆ ಸುಮನಾ ಗೌಡ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಮಂಜುನಾಥ ನಾವಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೃಷ್ಣೇಗೌಡ ಮತ್ತಿತರರು ಉಪಸ್ಥಿತರಿದ್ದರು.

********

ಯಾದಗಿರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ರೈತರ ಹಾಗೂ ವರ್ತಕರ ಉತ್ಪನ್ನಗಳು ಮಳೆ, ಬಿಸಿಲಿನಿಂದ ಹಾಳಾಗದಂತೆ ರಕ್ಷಣೆಗೆ ಆರ್‌ಐಡಿಎಫ್

ಯೋಜನೆ ೨೯ ಅಡಿಯಲ್ಲಿ ೨.೫ ಕೋಟಿ ರೂಪಾಯಿ ವೆಚ್ಚದಲ್ಲಿ ಕೈಗೊಂಡಿದ್ದ ಹರಾಜು ಕಟ್ಟೆ ಕಾಮಗಾರಿಗೆ ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯಾದಗಿರಿ ಕೃಷಿ ಉತ್ಪನ್ನ ಮಾರುಕಟ್ಟೆಯ ಪ್ರಾಂಗಣದಲ್ಲಿ ರೈತರೂ ಬೆಳೆದಂತ ಕೃಷಿ ಉತ್ಪನ್ನಗಳಿಗೆ ಉತ್ತಮ ಸ್ಪರ್ಧಾತ್ಮಕ ದರ ದೊರಕಿಸಿಕೊಡಲು ಎಪಿಎಂಸಿ ವತಿಯಿಂದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಿಸಿ ರಸ್ತೆ, ಚರಂಡಿ, ದಾರಿದೀಪ ಕುಡಿಯುವ ನೀರು ವಿದ್ಯುತ್ ಕಂಬ ಇನ್ನೂ ಹತ್ತು ಹಲವು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಿಯಾಯೋಜನೆ ತಯಾರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

********

ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಅವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆ ಹಿಂದುಳಿದ ವರ್ಗಗಳ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದರು. ಅವರು ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಜಿಲ್ಲಾ ಮಟ್ಟದ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಸೋಮಶೇಖರ್ ಮೇಸ್ತಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ವಿರೂಪಾಕ್ಷ ಗೌಡ ಪಾಟೀಲ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸತೀಶ್ ಮತ್ತಿತರರು ಉಪಸ್ಥಿತರಿದ್ದರು.

********

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರಿಗೆ ದಕ್ಷ, ವಿಶ್ವಾಸನೀಯ, ಆರಾಮದಾಯಕ ಹಾಗೂ ಮಿತವ್ಯಯಕರ ದರದಲ್ಲಿ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ, ಇದೇ ೧೯ರಿಂದ ಜಾರಿಗೆ ಬರುವಂತೆ ಅತ್ತಿಬೆಲೆ ಬಸ್ ನಿಲ್ದಾಣದಿಂದ, ಬಿದರಗುಪ್ಪೆ, ಮೇಡಹಳ್ಳಿ, ಸರ್ಜಾಪುರ ಬಸ್ ನಿಲ್ದಾಣ, ದೊಮ್ಮಸಂದ್ರ, ಕೊಡತಿಗೇಟ್, ಕೈಕೊಂಡರಹಳ್ಳಿ, ಬೆಳ್ಳಂದೂರು, ಕೆ.ಆರ್ ಪುರ ರೈಲ್ವೆ ನಿಲ್ದಾಣ, ಬಾಬುಸಾಬಪಾಳ್ಯ, ವೀರಣ್ಣನಪಾಳ್ಯ, ಹೆಬ್ಬಾಳ, ಕೋಗಿಲು ಕ್ರಾಸ್ ಮಾರ್ಗವಾಗಿ

ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ನೂತನವಾಗಿ ಮಾರ್ಗಸಂಖ್ಯೆ ಕೆಐಎ-ಲಹೆಚ್ ರಲ್ಲಿ ೦೬ ಹವಾನಿಯಂತ್ರಿತ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು ಎಂದು ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ತಿಳಿಸಿದ್ದಾರೆ.

********

ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಿ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅಧಿಕಾರಿಗಳಿಗೆ ಸೂಚಿಸಿದರು. ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಯಂಪಾಡ ಗ್ರಾಮ ಪಂಚಾಯಿತಿಯ ಸಭಾಂಗಣದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸರ್ವ ಸದಸ್ಯರ ಸಭೆಯಲ್ಲಿ ಕುಡಿಯುವ ನೀರಿನ ಸಮಸ್ಯೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ, ಕಾಮಗಾರಿಗಳು, ಸ್ವಚ್ಛ ಭಾರತ್ ಮಿಷನ್, ಕರ ವಸೂಲಿ ಸೇರಿದಂತೆ ಇನ್ನಿತರ ವಿಷಯಗಳು ಕುರಿತು ಚರ್ಚಿಸಿದರು ಮಾತನಾಡಿದರು.

***END***